ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಶಿಕ್ಷಣ ಇಲಾಖೆಯಲ್ಲಿನ ಖಾಲಿ ಹುದ್ದೆಗಳ ಭರ್ತಿ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

42 (140) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಶಿಕ್ಷಣ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ತೀವ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಖಾಲಿ ಇರುವ ಬೋಧಕ-ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಸರ್ಕಾರದ ನಿಲುವೇನು;

(ಇ) ಬೋಧಕರ ಕೊರತೆಯಿಂದ ಮಕ್ಕಳ ವಿದ್ಯಾಭ್ಯಾಸದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

(ಈ) ಖಾಲಿ ಉಳಿದಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಇಲ್ಲದಿದ್ದಲ್ಲಿ, ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು? (ಮಾಹಿತಿ ಒದಗಿಸುವುದು)